01.11.2024 19.35 hrs

<><*<><>*><>

## ಮುಖ್ಯಾಂಶಗಳು

- ಗುಜರಾತ್‌ನ ಅತಿದೊಡ್ಡ ತ್ಯಾಜ್ಯದಿಂದ ಇಂಧನ ಉತ್ಪಾದಿಸುವ ಘಟಕ - ಸಚಿವ ಅಮಿತ್ ಶಾ ಉದ್ಘಾಟನೆ
- ಭಾರತ-ಅಮೆರಿಕಾ ಜಂಟಿ ಪಡೆಗಳ ೧೫ ನೇ “ವಜ್ರ ಪ್ರಹಾರ” ಸಮರಾಭ್ಯಾಸ ನಾಳೆಯಿಂದ ಆರಂಭ
- ಕರ್ನಾಟಕದಲ್ಲಿ ರಾಜ್ಯೋತ್ಸವದ ಸಂಭ್ರಮ; ವಿವಿಧ ಕ್ಷೇತ್ರಗಳ ಸಾಧಕರಿಗೆ ಪ್ರಶಸ್ತಿ ಪ್ರದಾನ
- ಭಾರತ- ನ್ಯೂಜಿಲೆಂಡ್ ನಡುವಣ ಅಂತಿಮ ಟೆಸ್ಟ್ ಕ್ರಿಕೆಟ್ ಪಂದ್ಯ: ಮೊದಲ ದಿನದಾಟದಲ್ಲಿ ನ್ಯೂಜಿಲೆಂಡ್ ಎಲ್ಲಾ ವಿಕೆಟ್ ನಷ್ಟಕ್ಕೆ ೨೩೫ ರನ್

<><*<><>*><>

ಗುಜರಾತ್ ನ ಅಹಮದಾಬಾದ್‌ನ ಪಿಪ್ಲಾಜ್ ನಲ್ಲಿರುವ ಅತಿ ದೊಡ್ಡ ತ್ಯಾಜ್ಯದಿಂದ ಇಂಧನ ಉತ್ಪಾದಿಸುವ ಘಟಕವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಉದ್ಘಾಟಿಸಿದರು. ಪ್ರಯೋಗಾರ್ಥವಾಗಿದ್ದ ಈ ಘಟಕಕ್ಕೆ ಇಂದು ಅಧಿಕೃತ ಚಾಲನೆ ದೊರೆತಿದೆ. ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಮಾದರಿಯಲ್ಲಿ ೩೭೫ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಘಟಕವನ್ನು ನಿರ್ಮಿಸಲಾಗಿದೆ. ಇದು ಪ್ರತಿದಿನ ೧ ಸಾವಿರ ಮೆಟ್ರಿಕ್ ಟನ್ ಘನ ತ್ಯಾಜ್ಯದಿಂದ ೧೫ ಮೆಗಾವ್ಯಾಟ್ ಇಂಧನ ಉತ್ಪಾದಿಸುವ ಸಾಮರ್ಥ್ಯ ಹೊಂದಿದೆ. ಹಸಿರು ಭವಿಷ್ಯಕ್ಕಾಗಿ ಇದು ಮಹತ್ವದ ಹೆಜ್ಜೆಯಾಗಲಿದೆ.

<><*<><>*><>

ಲಡಾಖ್ ನ ವಾಸ್ತವ ಗಡಿ ನಿಯಂತ್ರಣ ರೇಖೆಯಲ್ಲಿ ಭಾರತ ಮತ್ತು ಚೀನಾ ಪಡೆಗಳಿಂದ ಗಸ್ತು ಆರಂಭವಾಗಿದೆ. ಏಪ್ರಿಲ್ ೨೦೨೦ ರಲ್ಲಿ ಎರಡೂ ಪಡೆಗಳ ನಡುವಿನ ಸಂಘರ್ಷದ ಬಳಿಕ ಡೆಮ್‌ಚಾಕ್ ಪ್ರದೇಶದಲ್ಲಿ ಗಸ್ತು ಪುನರಾರಂಭವಾಗಿದೆ ಎಂದು ಭಾರತೀಯ ಸೇನೆಯ ಮೂಲಗಳು ತಿಳಿಸಿವೆ. ದೆಪ್ಸಾಂಗ್ ನಲ್ಲಿ ಶೀಘ್ರದಲ್ಲೇ ಗಸ್ತು ಆರಂಭವಾಗಲಿದೆ ಎಂದು ವರದಿಯಾಗಿದೆ.

<><*<><>*><>

ಜಾರ್ಖಂಡ್‌ನಲ್ಲಿ ಎರಡನೇ ಹಂತದ ವಿಧಾನಸಭಾ ಚುನಾವಣೆಗೆ ನಾಮಪತ್ರ ಹಿಂಪಡೆಯುವ ಪ್ರಕ್ರಿಯೆ ಇಂದು ಮುಕ್ತಾಯವಾಗಿದೆ. ಈ ಹಂತದಲ್ಲಿ ೬೩೪ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ. ಎರಡನೇ ಹಂತದಲ್ಲಿ ೩೮ ಕ್ಷೇತ್ರಗಳಲ್ಲಿ ಇದೇ ೨೦ ರಂದು ಮತದಾನ ನಡೆಯಲಿದೆ.

ಮೊದಲ ಹಂತದ ಮತದಾನ ಇದೇ ೧೩ ರಂದು ೪೩ ವಿಧಾನಸಭಾ ಕ್ಷೇತ್ರಗಳಲ್ಲಿ ನಡೆಯಲಿದ್ದು ಮತ ಎಣಿಕೆಗೆ ಇದೇ ೨೩ ಕ್ಕೆ ನಿಗದಿಯಾಗಿದೆ.

<><*<><>*><>

ಭಾರತ-ಅಮೆರಿಕಾ ಜಂಟಿ ಪಡೆಗಳ ೧೫ ನೇ ವಿಶೇಷ ಆವೃತ್ತಿ "ವಜ್ರ ಪ್ರಹಾರ" ಸಮರಾಭ್ಯಾಸಕ್ಕೆ ಭಾರತೀಯ ಸೇನಾ ತುಕಡಿ ಇಂದು ಹೊರಟಿದೆ. ಈ ಅಭ್ಯಾಸ ನಾಳೆಯಿಂದ ನವೆಂಬರ್ ೨೨ ರವರೆಗೆ ಅಮೆರಿಕಾದ ಇಡಾಹೊದಲ್ಲಿರುವ ಆರ್ಚರ್ಡ್ ಯುದ್ಧ ತರಬೇತಿ ಕೇಂದ್ರದಲ್ಲಿ ನಡೆಯಲಿದೆ. ಇದೇ ಸಮರಾಭ್ಯಾಸದ ಹಿಂದಿನ ಆವೃತ್ತಿಯು ಕಳೆದ ವರ್ಷ ಡಿಸೆಂಬರ್‌ನಲ್ಲಿ ಮೇಘಾಲಯದ ಉಮ್ರೋಯ್‌ನಲ್ಲಿ ನಡೆದಿತ್ತು. ಭಾರತ ಮತ್ತು ಅಮೆರಿಕ ಸೇನೆಯ ನಡುವಿನ ಈ ವರ್ಷದ ಎರಡನೇ ಸಮರಾಭ್ಯಾಸ ಇದಾಗಿದೆ. "ಯುಧ್ ಅಭ್ಯಾಸ ೨೦೨೪", ಸೆಪ್ಟೆಂಬರ್‌ನಲ್ಲಿ ರಾಜಸ್ಥಾನದಲ್ಲಿ ನಡೆದಿತ್ತು. ಜಂಟಿ ಸಮರಾಭ್ಯಾಸದಲ್ಲಿ ಭಾಗವಹಿಸುವ ಎರಡೂ ದೇಶಗಳ ತುಕಡಿಗಳಲ್ಲಿ ತಲಾ ೪೫ ಸಿಬ್ಬಂದಿ ಇರಲಿದ್ದು, ಭಾರತವನ್ನು ವಿಶೇಷ ಪಡೆಗಳ ಘಟಕ ಮತ್ತು ಅಮೆರಿಕವನ್ನು ಗ್ರೀನ್ ಬೆರೆಟ್ಸ್ ಪ್ರತಿನಿಧಿಸಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಪರಸ್ಪರ ಕಾರ್ಯಕ್ಷಮತೆ ಹೆಚ್ಚಿಸುವುದು "ವಜ್ರ ಪ್ರಹಾರ್" ಉದ್ದೇಶವಾಗಿದ್ದು, ಇದು ಮರುಭೂಮಿ ಮತ್ತು ಅರೆ ಮರುಭೂಮಿ ಪರಿಸರದಲ್ಲಿ, ಜಂಟಿ ವಿಶೇಷ ಪಡೆಗಳ ಕಾರ್ಯಾಚರಣೆಯನ್ನು ನಿರ್ವಹಿಸುವಲ್ಲಿ, ಸಂಯೋಜಿತ ಸಾಮರ್ಥ್ಯಗಳನ್ನು ಹೆಚ್ಚಿಸುತ್ತದೆ.

<><*<><>*><>

ಪ್ರತಿಷ್ಠಿತ ರಾಷ್ಟ್ರೀಯ ಯುವ ಪ್ರಶಸ್ತಿ ೨೦೨೨-೨೩ ಕ್ಕೆ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಇಂದಿನಿಂದ ಆರಂಭವಾಗಿದೆ. ಇದೇ ೧೫ರವರೆಗೆ ಅರ್ಜಿ ಸಲ್ಲಿಕೆಗೆ ಅವಕಾಶವಿದೆ. ಆರೋಗ್ಯ, ಮಾನವ ಹಕ್ಕುಗಳ ರಕ್ಷಣೆ, ಸಮುದಾಯ ಸೇವೆ ಮೊದಲಾದ ಅಭಿವೃದ್ಧಿ ಕಾರ್ಯಗಳಲ್ಲಿ ತೊಡಗಿಕೊಂಡು ಉತ್ತಮ ಸಾಧನೆ ಮಾಡಿರುವ ೧೫ ರಿಂದ ೨೯ ವರ್ಷ ವಯೋಮಾನದ ಯುವಜನರು ಮತ್ತು ಸಂಘ ಸಂಸ್ಥೆಗಳಿಗೆ ಈ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಪದಕ, ಪ್ರಶಸ್ತಿ ಪ್ರದಾನ ಪತ್ರ ಮತ್ತು ಒಂದು ಲಕ್ಷ ರೂಪಾಯಿ ನಗದು ಬಹುಮಾನವನ್ನು ಈ ಪುರಸ್ಕಾರ ಒಳಗೊಂಡಿದೆ. ಸಂಸ್ಥೆಗಳಿಗೆ ಪ್ರಶಸ್ತಿ ಮೊತ್ತ ಮೂರು ಲಕ್ಷ ರೂಪಾಯಿ. ಈ ಕುರಿತಂತೆ ವಿಡಿಯೋ ಸಂದೇಶ ನೀಡಿರುವ ಕೇಂದ್ರ ಸಚಿವ ಡಾ.ಮಾಂಡವೀಯಾ, ಭಾರತವನ್ನು ಪ್ರಗತಿಯತ್ತ ಕೊಂಡೊಯ್ಯಲು ಮತ್ತು ಒಳಗೊಳ್ಳುವಿಕೆಯನ್ನು ಪ್ರೋತ್ಸಾಹಿಸಲು ಯುವ ನಾಯಕತ್ವದ ಅಗತ್ಯದ ಬಗ್ಗೆ ಒತ್ತಿ ಹೇಳಿದ್ದಾರೆ.

<><*<><>*><>

ಟಿರಾನಾದಲ್ಲಿ ನಿನ್ನೆ ಭಾರತ ಮತ್ತು ಅಲ್ಬೇನಿಯಾ ದ್ವಿಪಕ್ಷೀಯ ಸಮಾಲೋಚನೆ ನಡೆದಿದ್ದು, ಉಭಯ ದೇಶಗಳು ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಅಂತರರಾಷ್ಟ್ರೀಯ ವಿಷಯಗಳ ಸಮಗ್ರ ಪರಿಶೀಲನೆ ನಡೆಸಿವೆ. ರಾಜಕೀಯ, ವ್ಯಾಪಾರ, ಸಾಂಸ್ಕೃತಿಕ ಸಂಬಂಧಗಳು ಮತ್ತು ಜನರ ನಡುವಿನ ಸಂಪರ್ಕಗಳನ್ನು ಬಲಪಡಿಸುವ ಕುರಿತು ಚರ್ಚೆ ನಡೆಯಿತು. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಅರುಣ್ ಕುಮಾರ್ ಸಾಹು, ಭಾರತದ

ನಿಯೋಗದ ನೇತೃತ್ವ ವಹಿಸಿದ್ದರು. ಅಲ್ಬೇನಿಯಾದ ವಿದೇಶಾಂಗ ಸಚಿವ ಎಂಡ್ರಿಟ್ ಯೆಝ್ಯುರಾಜ್, ಅಲ್ಬೇನಿಯನ್ ನಿಯೋಗದ ನೇತೃತ್ವ ವಹಿಸಿದ್ದರು.

<><*<><>*><>

ಕಲ್ಲಿದ್ದಲು ಸಚಿವಾಲಯವು ಒಟ್ಟಾರೆ ಕಲ್ಲಿದ್ದಲು ಉತ್ಪಾದನೆಯಲ್ಲಿ ಪ್ರಗತಿ ಸಾಧಿಸಿದೆ. ಈ ವರ್ಷದ ಅಕ್ಟೋಬರ್‌ನಲ್ಲಿ ೮೪.೪೫ ದಶಲಕ್ಷ ಟನ್  ಕಲ್ಲಿದ್ದಲು ಉತ್ಪಾದಿಸಿದ್ದು, ಕಳೆದ ವರ್ಷ ಇದೇ ಅವಧಿಯಲ್ಲಿ ೭೮.೫೭ ದಶಲಕ್ಷ ಟನ್ ಕಲ್ಲಿದ್ದಲು ಉತ್ಪಾದನೆಯಾಗಿತ್ತು. ಅಂದರೆ, ಶೇಕಡ ೭.೪೮ ರಷ್ಟು ಹೆಚ್ಚಳವನ್ನು ದಾಖಲಿಸಿದೆ. ಪ್ರಸಕ್ತ ಆರ್ಥಿಕ ವರ್ಷದಲ್ಲಿ ಅಕ್ಟೋಬರ್ ವರೆಗಿನ ಸಂಚಿತ ಕಲ್ಲಿದ್ದಲು ಉತ್ಪಾದನೆಯು ೫೩೭.೪೫ ದಶಲಕ್ಷ ಟನ್ ತಲುಪಿದ್ದು, ಕಳೆದ ಹಣಕಾಸು ವರ್ಷದ ಇದೇ ಅವಧಿಯಲ್ಲಿ ೫೦೬.೫೬ ದಶಲಕ್ಷ ಟನ್‌ಗಿಂತ ಶೇಕಡ ೬.೧೦ ರಷ್ಟು ಬೆಳವಣಿಗೆಯನ್ನು ದಾಖಲಿಸಿದೆ.

<><*<><>*><>

ಕರ್ನಾಟಕದಲ್ಲಿ ರಾಜ್ಯೋತ್ಸವದ ಸಂಭ್ರಮ ಮನೆ ಮಾಡಿದೆ. ರಾಜ್ಯೋತ್ಸವ ಪ್ರಶಸ್ತಿ ೨೦೨೪ ಮತ್ತು ಕರ್ನಾಟಕ ಸಂಭ್ರಮ-೫೦ರ ಸುವರ್ಣ ಮಹೋತ್ಸವ ಪ್ರಶಸ್ತಿ ಪ್ರದಾನ ಹಾಗೂ ಸಮಾರೋಪ ಸಮಾರಂಭ ಬೆಂಗಳೂರಿನಲ್ಲಿಂದು ನಡೆಯುತ್ತಿದೆ. ಕಾರ್ಯಕ್ರಮದಲ್ಲಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ, ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಲು ರಾಜ್ಯ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಕರ್ನಾಟಕ ನಾಮಕರಣಗೊಂಡು ೫೦ ವರ್ಷದ ಸಂಭ್ರಮಾಚರಣೆಯ ಭಾಗವಾಗಿ ವಿಶೇಷ ಅಂಚೆ ಚೀಟಿಗಳನ್ನು ಹೊರತಂದಿದೆ ಎಂದು ತಿಳಿಸಿದರು. ಇಂದಿನ ಕಾರ್ಯಕ್ರಮದಲ್ಲಿ ೬೯ ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ಅಲ್ಲದೇ ಕರ್ನಾಟಕ ಸಂಭ್ರಮ-೫೦ ಅಭಿಯಾನದ ಅಂಗವಾಗಿ ಪ್ರತ್ಯೇಕ ಪ್ರಶಸ್ತಿಯನ್ನೂ ಪ್ರದಾನ ಮಾಡಲಾಗುತ್ತಿದ್ದು ಪ್ರಶಸ್ತಿ ಮೊತ್ತವನ್ನು  ೧ ಲಕ್ಷ ರೂಪಾಯಿಗೆ ಹೆಚ್ಚಳ ಮಾಡಲಾಗಿದೆ. ಇದಕ್ಕೂ ಮುನ್ನ ಇಂದು ಬೆಳಗ್ಗೆ ಬೆಂಗಳೂರಿನಲ್ಲಿಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಮ್ಮಿಕೊಂಡಿದ್ದ ೬೯ ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ನಾಡದೇವಿ ಭುವನೇಶ್ವರಿಗೆ ಪುಷ್ಪಾರ್ಚನೆ ಮಾಡಿ,  ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.  ಕನ್ನಡೇತರರಿಗೆ ಕನ್ನಡವನ್ನು ಕಲಿಸಲು ಪ್ರಯತ್ನಿಸುವ ಮೂಲಕ ಕನ್ನಡ ವಾತಾವರಣವನ್ನು ನಿರ್ಮಿಸಿ ಎಂದು ರಾಜ್ಯದ ಜನರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ.  ಕರ್ನಾಟಕ ಎಂದು ನಾಮಕರಣವಾಗಿ ೫೦ ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ೨೦೨೩ರ ನವೆಂಬರ್ ೧ ರಿಂದ ಇಡೀ ವರ್ಷ ಕರ್ನಾಟಕ ಸುವರ್ಣ ಸಂಭ್ರಮ ಆಚರಿಸಬೇಕೆಂದು ಬಜೆಟ್ ನಲ್ಲಿ ಘೋಷಣೆ ಮಾಡಲಾಗಿತ್ತು. ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಎಂಬ ಘೋಷವಾಕ್ಯದೊಡನೆ ಇಡೀ ವರ್ಷ ಅರ್ಥಪೂರ್ಣ ಆಚರಣೆ ನಡೆಯಿತು.  ಬಡ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ನೀಡಬೇಕೆಂಬ ಉದ್ದೇಶದಿಂದ ಪೌಷ್ಠಿಕಾಂಶ ಆಹಾರ ನೀಡಲಾಗುತ್ತಿದೆ ಹಾಗೂ ಕನ್ನಡ ಸ್ಪಷ್ಟವಾಗಿ ಬರೆಯಲು ಮತ್ತು ಓದಲು ಬಾರದವರಿಗೆ ಕನ್ನಡ ಕಲಿಸುವ ಉದ್ದೇಶದಿಂದ “ಕನ್ನಡ ದೀವಿಗೆ” ಕಿರುಹೊತ್ತಿಗೆಯನ್ನು ಇಂದು ಲೋಕಾರ್ಪಣೆ ಮಾಡಲಾಗಿದೆ ಎಂದು ಅವರು

ಹೇಳಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಕನ್ನಡ ಭಾಷೆಯನ್ನು ಬದುಕಿನ ಭಾಷೆಯನ್ನಾಗಿಸುವುದು ನಮ್ಮ ಗುರಿ. ನಮ್ಮ ತಾಯ್ನಾಡಿಗೆ ಗೌರವ ಸಲ್ಲಿಸುವುದರೊಂದಿಗೆ ಈ ನೆಲಕ್ಕೆ ಕೃತಜ್ಞತೆ ಸಲ್ಲಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು. ರಾಜ್ಯೋತ್ಸವದ ಪ್ರಯುಕ್ತ ಎಲ್ಲಾ ಜಿಲ್ಲೆಗಳಲ್ಲೂ ಜಿಲ್ಲಾ ಉಸ್ತುವರಿ ಸಚಿವರು ಧ್ವಜರೋಹಣ ನೆರವೇರಿಸಿ, ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಅನಾವರಣಗೊಳಿಸಿದರು.

<><*<><>*><>

ದೀಪಾವಳಿ ಅಂಗವಾಗಿ ನಿನ್ನೆ ಸಂಜೆ ಮತ್ತು ಇಂದು ಧನಲಕ್ಷ್ಮೀ ಪೂಜೆಯನ್ನು ನಾಡಿನೆಲ್ಲೆಡೆ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಅಮಾವಾಸ್ಯೆ ಲಕ್ಷ್ಮೀ ಪೂಜೆ ಅಂಗವಾಗಿ ಅಂಗಡಿ ಮುಂಗಟ್ಟುಗಳಲ್ಲಿ ವರ್ತಕರು ವಿಶೇಷ ಪೂಜೆ ನೆರವೇರಿಸಿದರು. ದೀಪಾವಳಿ ಹಬ್ಬದ ಪ್ರಯುಕ್ತ ಇಂದೂ ಕೂಡ ದೀಪದ ಬೆಳಕು ಪ್ರಜ್ವಲಿಸುತ್ತಿದ್ದು, ಪಟಾಕಿ ಸಿಡಿಸಿ ಸಂಭ್ರಮಿಸುವ ದೃಶ್ಯ ಸಾಮಾನ್ಯವಾಗಿದೆ. ಈ ಬಾರಿ ಹಸಿರು ಪಟಾಕಿ ಬಳಕೆಗೆ ಒತ್ತು ನೀಡಲಾಗಿದ್ದು, ಜನರು ಮಾಲಿನ್ಯ ಮುಕ್ತ ಹಬ್ಬ ಆಚರಿಸುತ್ತಿದ್ದಾರೆ. ನಾಳೆ ಬಲಿಪಾಡ್ಯಮಿಗೆ ಭರದ ಸಿದ್ಧತೆಗಳು ನಡೆದಿವೆ.

<><*<><>*><>

ಹಬ್ಬದ ಋತುವಿನಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಈ ವರ್ಷ ದಕ್ಷಿಣ ಕೇಂದ್ರ ರೈಲ್ವೆಯು ೮೫೪ ವಿಶೇಷ ರೈಲುಗಳ ಸಂಚಾರಕ್ಕೆ ವ್ಯವಸ್ಥೆ ಮಾಡಿದೆ. ಕಳೆದ ವರ್ಷ ೬೨೬ ವಿಶೇಷ ರೈಲುಗಳ ಸಂಚಾರವಿದ್ದು ಈ ವರ್ಷ ಈ ಪ್ರಮಾಣ ಗಣನೀಯವಾಗಿ ಹೆಚ್ಚಾಗಿದ್ದು, ಪ್ರಯಾಣಿಕರಿಗೆ ಸುಗಮ ಮತ್ತು ಅನುಕೂಲಕರ ಪ್ರಯಾಣಾನುಭೂತಿ ಒದಗಿಸಿದೆ. ಈ ರೈಲ್ವೆ ವಿಭಾಗವು ಬೆಂಗಳೂರು, ತಿರುಪತಿ, ಕಾಚಿಗುಡ, ಗೋರಖ್‌ಪುರ್ ಮೊದಲಾದೆಡೆಗಳಿಗೆ ವಿಶೇಷ ರೈಲು ಸಂಚಾರಕ್ಕೆ ವ್ಯವಸ್ಥೆ ಮಾಡಿದೆ. ನವೆಂಬರ್ ನಲ್ಲಿ ದಟ್ಟಣೆ ತಗ್ಗಿಸಲು ವಿಶಾಖಪಟ್ಟಣಂ ಮತ್ತು ವಿಜಯವಾಡ ನಡುವೆ ೧೬ ಕಾಯ್ದಿರಿಸದ ವಿಶೇಷ ರೈಲುಗಳ ವ್ಯವಸ್ಥೆಯನ್ನೂ ಮಾಡಲಾಗಿದೆ.

<><*<><>*><>

ಸ್ಪೇನ್‌ನಲ್ಲಿ ಭಾರಿ ಮಳೆಯಿಂದಾಗಿ ಭೀಕರ ಪ್ರವಾಹ ಪರಿಸ್ಥಿತಿ ಎದುರಾಗಿದ್ದು, ಸಾವಿಗೀಡಾದವರ ಸಂಖ್ಯೆ ೨೦೨ಕ್ಕೆ ಏರಿಕೆಯಾಗಿದೆ. ದೇಶದ ನೈಋತ್ಯ ಭಾಗದ ಕರಾವಳಿ ಪ್ರದೇಶದಲ್ಲಿ ಭಾರಿ ಮಳೆಯಾಗಲಿದೆ ಎಂದು ಅಲ್ಲಿನ ಹವಾಮಾನ ಇಲಾಖೆ ರೆಡ್ ಅಲರ್ಟ್ ನೀಡಿದೆ. ಸುಮಾರು ೪೦ ಸಾವಿರ ಜನರು ವಿದ್ಯುತ್ ಸಂಪರ್ಕವಿಲ್ಲದೇ ಪರದಾಡಿದ್ದಾರೆ. ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗೆ ಹೆಚ್ಚುವರಿ ಸೇವಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಸ್ಥಳೀಯ ಮಾಧ್ಯಮ ವರದಿ ಮಾಡಿದೆ.

<><*<><>*><>

ಇಂಡೋನೇಷ್ಯಾದ ಜಕಾರ್ತಾ ಬಳಿಯ ಅಡುಗೆ ಎಣ್ಣೆ ಕಾರ್ಖಾನೆಯಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ ಕನಿಷ್ಠ ೮ ಮಂದಿ ಮೃತಪಟ್ಟಿದ್ದು, ೯ ಮಂದಿ ಗಾಯಗೊಂಡಿದ್ದಾರೆ ಎಂದು

ಅಧಿಕಾರಿಗಳು ತಿಳಿಸಿದ್ದಾರೆ. ಜಕಾರ್ತಾದ ಬೆಕಾಸಿಯಲ್ಲಿರುವ ಕೈಗಾರಿಕಾ ಸಂಕೀರ್ಣದಲ್ಲಿ ಸುಮಾರು ೨೦ ಅಗ್ನಿಶಾಮಕ ವಾಹನಗಳು ಬೆಂಕಿ ನಂದಿಸುವ ಕಾರ್ಯದಲ್ಲಿ ನಿರತವಾಗಿವೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೮.೩೫ ಕ್ಕೆ <>*><>